**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹೊಸಕೋಟೆ**

**ಸಿ. ಸಿ. ನಂ. 1388/2020**

ಪಿರ್ಯಾದುದಾರರು:– ತಿರುಮಲಶೆಟ್ಟಿಹಳ್ಳಿ ಪೊಲೀಸ್ ಠಾಣೆ, ಹೊಸಕೋಟೆ

ವಿರುದ್ದ

ಆರೋಪಿ:– ಚೇತನ್ ಕುಮಾರ ಎಚ್.ಪಿ. ಬಿನ್ ಪಾರ್ಥ ಕುಮಾರ, 23 ವರ್ಷ
ವಾಸ: ಹೊನಚನಹಳ್ಳಿ ಗ್ರಾಮ, ಜಡಿಗೇನಹಳ್ಳಿ ಹೋಬಳಿ,
ಹೊಸಕೋಟೆ ತಾಲ್ಲೂಕು.

**ದೋಷಾರೋಪಣೆ**

ಶ್ರೀ ಗಿರೀಶ ಆರ್.ಬಿ., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:

ದಿ: 07.05.2020 ರಂದು ಸಂಜೆ 5.00 ಗಂಟೆ ಸಮಯದಲ್ಲಿ ಘನ ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಹೊಸಕೋಟೆ ತಾಲ್ಲೂಕು, ತಿರುಮಲಶೆಟ್ಟಿಹಳ್ಳಿ ಪೊಲೀಸ್ ಠಾಣಾ ಸರಹದ್ದು, ಹೊನಚನಹಳ್ಳಿ ಗ್ರಾಮದ ವ್ಯಾಪ್ತಿಗೆ ಸೇರಿದ ಬೆಂಗಳೂರು ನಗರದ ವಾಸಿ ಜಯರಾಮರೆಡ್ಡಿರವರಿಗೆ ಸೇರಿದ ಕೋಳಿ ಫಾರಂ ಶೆಡ್ಡಿನಲ್ಲಿ ಚಾ.ಸಾ.1ರವರು ತಮ್ಮ ಸ್ನೇಹಿತರೊಂದಿಗೆ ಟೈಂಪಾಸ್ ಮಾಡಲು ಘಟ್ಟ ಆಟವನ್ನು ಆಡುತ್ತಿದ್ದಾಗ ಆ ಸಮಯದಲ್ಲಿ ಆರೋಪಿಯಾದ ನೀವು ಸದರಿ ಸ್ಥಳಕ್ಕೆ ಹೋಗಿ ಚಾ.ಸಾ.1ರವರಿಗೆ ಬಾಯಿಗೆ ಬಂದಂತೆ ಮಾತನಾಡಿರುತ್ತೀರಿ. ಆ ಮೂಲಕ ನೀವು ಭಾ.ದಂ.ಸಂ. ಕಲಂ.504ರ ರೀತ್ಯ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರೆಂದು ಆರೋಪಿಸಲಾಗಿದೆ.

ಅದೇ ದಿನ, ಅದೇ ಸಮಯ ಮತ್ತು ಸ್ಥಳದಲ್ಲಿ ಚಾ.ಸಾ.1ರವರು ಆರೋಪಿಯಾದ ನಿಮಗೆ ನೀನು ಹೀಗೆಲ್ಲಾ ಮಾತನಾಡುವುದು ಸರಿಯಲ್ಲ ಎಂದು ಹೇಳಿದ್ದಕ್ಕೆ ನೀವು ಚಾ.ಸಾ.1ರವರಿಗೆ ನೋವುಂಟು ಮಾಡುವ ಉದ್ದೇಶದಿಂದ ನಿಮ್ಮ ಬಳಿಯಿದ್ದ ಚಾಕುವಿನಿಂದ ಬೆನ್ನಿಗೆ ಚುಚ್ಚಿ ತೀವ್ರ ಸ್ವರೂಪದ ರಕ್ತಗಾಯವನ್ನುಂಟು ಮಾಡಿ ಹಲ್ಲೆ ಮಾಡಿರುತ್ತೀರಿ. ಆ ಮೂಲಕ ನೀವು ಭಾ.ದಂ.ಸಂ. ಕಲಂ.324ರ ರೀತ್ಯ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರೆಂದು ಆರೋಪಿಸಲಾಗಿದೆ.

ಅದೇ ದಿನ, ಅದೇ ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಚಾ.ಸಾ.1ರವರಿಗೆ ನೋವುಂಟು ಮಾಡುವ ಉದ್ದೇಶದಿಂದ ಕಾಲಿನಿಂದ ಒದ್ದು ಸಾಮಾನ್ಯ ಸ್ವರೂಪದ ನೋವು, ಗಾಯವನ್ನುಂಟು ಮಾಡಿರುತ್ತೀರಿ. ಆ ಮೂಲಕ ನೀವು ಭಾ.ದಂ.ಸಂ. ಕಲಂ.323ರ ರೀತ್ಯ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರೆಂದು ಆರೋಪಿಸಲಾಗಿದೆ.

ಅದೇ ದಿನ, ಅದೇ ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಚಾ.ಸಾ.1ರವರಿಗೆ ಜೀವ ಭಯವನ್ನುಂಟು ಮಾಡುವ ಮತ್ತು ಹೆದರಿಸುವ ಉದ್ದೇಶದಿಂದ ಪ್ರಾಣಬೆದರಿಕೆ ಹಾಕಿರುತ್ತೀರಿ. ಆ ಮೂಲಕ ನೀವು ಭಾ.ದಂ.ಸಂ. ಕಲಂ.506ರ ರೀತ್ಯ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರೆಂದು ಆರೋಪಿಸಲಾಗಿದೆ.

ಈ ಮೇಲ್ಕಂಡ ದೋಷಾರೋಪವನ್ನು ನೀವು ಈ ನ್ಯಾಯಾಲಯದ ಸಂಜ್ಞಾನದೊಳಗೆ ಎಸಗಿದ್ದು ನಿಮ್ಮನ್ನು ವಿಚಾರಣೆಗೆ ಒಳಪಡಿಸಲು ಈ ಮೂಲಕ ನಾನು ನಿರ್ದೇಶಿಸುತ್ತೇನೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ. ನ್ಯಾಯಾಲಯ., ಹೊಸಕೋಟೆ.**

**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹೊಸಕೋಟೆ</u>**

**<u>ಸಿ. ಸಿ. ನಂ. 1388/2020</u>**

ಪಿರ್ಯಾದುದಾರರು:– ತಿರುಮಲಶೆಟ್ಟಿಹಳ್ಳಿ ಪೊಲೀಸ್ ಠಾಣೆ, ಹೊಸಕೋಟೆ

ವಿರುದ್ದ

ಆರೋಪಿ:– ಚೇತನ್ ಕುಮಾರ ಎಚ್.ಪಿ. ಬಿನ್ ಪಾರ್ಥ ಕುಮಾರ, 23 ವರ್ಷ
ವಾಸ: ಹೊನಚನಹಳ್ಳಿ ಗ್ರಾಮ, ಜಡಿಗೇನಹಳ್ಳಿ ಹೋಬಳಿ,
ಹೊಸಕೋಟೆ ತಾಲ್ಲೂಕು.

**<u>ದೋಷಾರೋಪಣೆ</u>**

ಪ್ರಶ್ನೆ 1: ಮೇಲ್ಕಂಡ ದೋಷಾರೋಪಣೆ ಓದಿ ಹೇಳಿದ್ದು ನಿಮಗೆ ಅರ್ಥವಾಯಿತೆ?

ಉತ್ತರ:

ಪ್ರಶ್ನೆ 2: ನೀವು ತಪ್ಪನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?

ಉತ್ತರ:

ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ತೆರೆದ ನ್ಯಾಯಾಲಯದಲ್ಲಿ ದಿ:13.07.2021ರಂದು ಧೃಢೀಕರಿಸಿದ್ದೇನೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ. ನ್ಯಾಯಾಲಯ., ಹೊಸಕೋಟೆ.**